ಬಸವನಬಾಗೇವಾಡಿ ಕ್ಷೇತ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು

957 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರ ಬಸವನ ಬಾಗೇವಾಡಿಯ ಜನಸಂಖ್ಯೆಗೆ ಅನುಗುಣವಾಗಿದೆಯೇ?

ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು? ಮತ್ತು ಈ ಹುದ್ದೆಗಳು ಯಾವ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇವೆ?

ಈ) ಸದರಿ ಹುದ್ದೆಗಳು ಎಂದಿನಿಂದ ಖಾಲಿ ಇವೆ?

ಉ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟಂಬ ಕಲ್ಯಾಣ ಸಚಿವರು) :

ಅ) 14 (ಹದಿನಾಲ್ಕು)

ಆ) ಹೌದು.

ಇ) 2 (ಎರಡು)

1. ಪ್ರಾಥಮಿಕ ಆರೋಗ್ಯ ಕೇಂದ್ರ, ಗೊಳಸಂಗಿಯಲ್ಲಿ
2. ಪ್ರಾಥಮಿಕ ಆರೋಗ್ಯ ಕೇಂದ್ರ, ಸಾಸನೂರಿನಲ್ಲಿ

ಈ) ಪ್ರಾಥಮಿಕ ಆರೋಗ್ಯ ಕೇಂದ್ರ ಗೊಳಸಂಗಿಯಲ್ಲಿ ದಿನಾಂಕ 1.6.99ರಿಂದ ಮತ್ತು ಸಾಸನೂರಿನಲ್ಲಿ ಕಳೆದ 2 ವರ್ಷದಿಂದ ಖಾಲಿ ಇರುತ್ತದೆ.

ಉ) ಈಗ ನೇಮಕಾತಿ ಮಾಡಿಕೊಳ್ಳಲಾಗುತ್ತಿರುವ 573 ವೈದ್ಯರುಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಈಗಾಗಲೇ ಪ್ರಕಟಿಸಿದ್ದು, ಖಾಲಿ ಇರುವ ಹುದ್ದೆಗಳನ್ನು ಈ ನೇಮಕಾತಿಗೊಳ್ಳುತ್ತಿರುವ ವೈದ್ಯರುಗಳಿಂದ ಭರ್ತಿಮಾಡಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಇರುವ ಸರ್ಕಾರಿ ಪ್ರೌಢಶಾಲೆಗಳು

958 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಇರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?

ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು? ಮತ್ತು ಸರ್ಕಾರಿ ಮಹಿಳಾ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು?

ಇ) ಈ ಶಾಲೆಗಳು ಕಾಲೇಜುಗಳು ಬಸವನ ಬಾಗೇವಾಡಿ ಕ್ಷೇತ್ರದ ಜನಸಂಖ್ಯೆಗೆ ಅನುಗುಣವಾಗಿ ಇವೆಯೆ?

ಈ) ಹಾಗಿಲ್ಲದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಮೂರು ಸರ್ಕಾರಿ ಪ್ರೌಢಶಾಲೆಗಳಿವೆ.

ಆ) ಮೂರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ. ಸರ್ಕಾರಿ ಮಹಿಳಾ ಪ್ರೌಢಶಾಲೆಗಳು ಇರುವುದಿಲ್ಲ.

ಇ) ಇದೆ. ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಅಗತ್ಯತೆಗೆ ಅನುಗುಣವಾಗಿ ತೆರೆಯಲ್ಪಟ್ಟಿದೆ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಮೈಸೂರು ಜಿಲ್ಲಾ ಪಂಚಾಯಿತಿಗಳಲ್ಲಿ ಹಣ ದುರುಪಯೋಗವಾಗಿರುವ ಬಗ್ಗೆ

959 - ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆಯ ಎಷ್ಟು ಪಂಚಾಯ್ತಿಗಳಲ್ಲಿ ಇದುವರೆವಿಗೆ ಹಣ ದುರುಪಯೋಗವಾಗಿದೆ? (ಪೂರ್ಣ ಮಾಹಿತಿಯನ್ನು ನೀಡುವುದು)

ಆ) ಈ ಅವ್ಯವಹಾರದ ಬಗ್ಗೆ ಸರ್ಕಾರ ಯಾವ ಯಾವ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡಿದೆ? (ವಿವರಣೆಗಳನ್ನು ನೀಡುವುದು)

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) 23 ಗ್ರಾಮ ಪಂಚಾಯ್ತಿಗಳಲ್ಲಿ ಹಣ ದುರುಪಯೋಗವಾಗಿರುವ 26 ಪ್ರಕರಣಗಳಿವೆ. (ಪಟ್ಟಿ ಲಗತ್ತಿಸಿದೆ)

ಆ) ಎಲ್ಲಾ 26 ಪ್ರಕರಣಗಳಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಅವರು ಶಿಸ್ತು ಕ್ರಮ ಜರುಗಿಸಿರುತ್ತಾರೆ. ಇವುಗಳಲ್ಲಿ 6 ಪ್ರಕರಣಗಳಲ್ಲಿ ದಂಡನೆ ವಿಧಿಸಿ ದುರುಪಯೋಗ ಆಗಿದ್ದ ಹಣವನ್ನು ಸರ್ಕಾರಕ್ಕೆ ಜಮಾ ಮಾಡಿಸಿದೆ. ಉಳಿದ ಪ್ರಕರಣಗಳಲ್ಲಿ ಕ್ರಮ ನಡೆಸಲಾಗುತ್ತಿದೆ.